163(220) ಶ್ರೀ ಪಾಟೀಲ್ ಎಂ.ವೈ. (ಅಫ್ಜಲ್ ಪುರ್): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ವರ್ಷ ಭೀಮಾ ನದಿ ಪ್ರವಾಹದಲ್ಲಿ ಜಲಾವೃತಗೊಂಡ ಹಳ್ಳಿಗಳು ಎಷ್ಟು;

ಆ) ಈ ಹಳ್ಳಿಗಳನ್ನು ಸ್ಥಳಾಂತರಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು: (ವಿವರಗಳನ್ನು ನೀಡುವುದು)?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) ಕಳೆದ ವರ್ಷ ಭೀಮಾ ನದಿ ಪ್ರವಾಹದಿಂದ 42 ಗ್ರಾಮಗಳಲ್ಲಿ ಭಾಗಶಃ ನೀರು ನುಗ್ಗಿರುತ್ತದೆ.

ಆ) ಪ್ರವಾಹದಿಂದ 42 ಗ್ರಾಮಗಳಲ್ಲಿ ಭಾಗಶಃ ನೀರು ನುಗ್ಗಿರುವುದರಿಂದ 1,949 ಕುಟುಂಬಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಯಿತು. ಇತ್ತೀಚೆಗೆ ಪ್ರವಾಹ ಪೀಡಿತ ಗ್ರಾಮಗಳಿಗೆ ಇಂದಿರಾ ಆವಾಸ್ ಯೋಜನೆ ಅಡಿ ಗುಲಬರ್ಗಾ ಜಿಲ್ಲೆಗೆ 1000 ಮನೆಗಳ ಗುರಿಯನ್ನು ನಿಗಧಿ ಪಡಿಸಿಲಾಗಿದೆ. ಅದರಂತೆ ಬಡತನ ರೇಖೆಗಿಂತ ಕೆಳಗಡೆ ಆದಾಯ ಹೊಂದಿದ 983 ಫಲಾನುಭವಿಗಳನ್ನು ಆಯ್ಕೆ ಮಾಡಿ ಇಂದಿರಾ ಆವಾಸ್ ಯೋಜನೆ ಅಡಿ ಮನೆಗಳನ್ನು ಮಂಜೂರು ಮಾಡಲು ವ್ಯವಸ್ಥಾಪಕ ನಿರ್ದೇಶಕರು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಬೆಂಗಳೂರು ಇವರಿಗೆ 790 ಫಲಾನುಭವಿಗಳ ಪಟ್ಟಿಯನ್ನು ದಿ:2–3–2006 ರಂದು ಸಲ್ಲಿಸಲಾಗಿದೆ.

165(24) ಶ್ರೀ ಎಸ್.ಎಸ್. ಪಾಟೀಲ್ (ಮುಂಡರಗಿ): ಮಾನ್ಯ ಉಪ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಂಡರಗಿಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ಸೇರಿದ ಜಾಗ ಎಷ್ಟು? (ವಿವರ ನೀಡುವುದು).

ಆ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ಸೇರಿದ ಸರ್ಕಾರಿ ಜಾಗವನ್ನು ಅತಿಕ್ರಮಣ ಮಾಡಿರುವುದು ನಿಜವೇ?

ಇ) ಹಾಗಿದ್ದಲ್ಲಿ ಅವರ ಮೇಲೆ ಕೈಗೊಳ್ಳಲಾಗಿರುವ ಕ್ರಮವೇನು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಯವರು):

ಅ) ಗದಗ ಜಿಲ್ಲೆ ಮುಂಡರಗಿ ತಾಲ್ಲೂಕಿನ ಬ್ಯಾಲವಾಡಗಿ ಬ್ಯಾಲವಾಡಗಿ ಗ್ರಾಮದ ಸರ್ವೆ ನಂ.4 ರಲ್ಲಿ 15–32 ಎಕರೆ ಜಮೀನನ್ನು ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಕೈಗಾರಿಕಾ ಉದ್ದೇಶಕ್ಕಾಗಿ ಭೂ ಸ್ವಾಧೀನಪಡಿಸಿಕೊಂಡು ದಿನಾಂಕ 28.3.1991 ರಂದು ಮಂಡಳಿಗೆ ವರ್ಗಾಯಿಸಲಾಗಿದೆ.

ಆ) ಇಲ್ಲ. ಆದರೂ ಖಾಸಗಿ ಜಮೀನನ್ನು ಅತಿಕ್ರಮಣ ಮಾಡಲಾಗಿದೆ ಎಂಬ ಅಪಾದನೆ ಮೇರೆಗೆ ನ್ಯಾಯಲಯದಲ್ಲಿ ಪ್ರಕರಣ ಬಾಕಿ ಇದ್ದು ವಿಚಾರಣಾ ಹಂತದಲ್ಲಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.